ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-

2 ವೈದ್ಯರ ಸಲಹಾ ಚೀಟಿಗಳನ್ನು ಹಾಜರುಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-20 ಎಂದು, 18 ವೈದ್ಯಕೀಯ ಬಿಲ್ಲುಗಳನ್ನು ಹಾಜರುಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-21 ಎಂದು ಗುರುತಿಸಲಾಯಿತು.

ಮುಂದುವರೆದ ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ನಿಪಿ-21ರ ಬಿಲ್ಲುಗಳಿಗೆ ಸಂಬಂಧಿಸಿದಂತೆ ವೈದ್ಯರ ಸಲಹಾ ಚೀಟಿಗಳನ್ನು ಹಾಜರುಪಡಿಸಿಲ್ಲ ಎಂದರೆ ನನ್ನ ಹತ್ತಿರು ಇರುವ ದಾಖಲೆ ಹಾಜರುಪಡಿಸಿರುತ್ತೇನೆ. ನಾನು ಹಾಜರುಪಡಿಸಿರುವ ದಾಖಲೆಗಳನ್ನು ಯಾವ ವೈದ್ಯರ ಹೆಸರು ಗೊತ್ತಾ ಎಂದರೆ ಸಾಕ್ಷಿ ನನಗೆ ನೆನಪಿಲ್ಲ ಎಂದು ನುಡಿಯುತ್ತಾರೆ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ನಾನು ನಿಪಿ-20 ಮತ್ತು ನಿಪಿ-21ನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು